JANUARY 14, 2025

**AKASHAVANI - DHARWAD**

**PRADESH SAMACHARA (KANNADA) 07.05**

<><><>

ಮುಖ್ಯಾಂಶಗಳು:

- ಆಕಾಶವಾಣಿ; ಸರ್ವಶಕ್ತ, ಸರ್ವವ್ಯಾಪಕ –ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

- ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಅವಧಿ ಮೀರಿ ಬಾಕಿ ಇರುವ ಪ್ರಕರಣಗಳನ್ನು ಆರು ತಿಂಗಳಲ್ಲಿ ಇತ್ಯರ್ಥ ಪಡಿಸಿ: ಸಚಿವ ಕೃಷ್ಣ ಬೈರೇಗೌಡ.

- ಇಂದು ಮಕರ ಸಂಕ್ರಾಂತಿ ಹಬ್ಬ. ಗಣ್ಯರ ಶುಭಾಶಯ.

- ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ವಿಶ್ವದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಮಹಾ ಕುಂಭಮೇಳಕ್ಕೆ ಅದ್ದೂರಿಯ ಚಾಲನೆ.

<><><>

ವಾರ್ತೆಗಳ ವಿವರ...

<><><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ಆಕಾಶವಾಣಿಯ ತಮ್ಮ 'ಮನ್ ಕಿ ಬಾತ್' ಮೂಲಕ ದೇಶದ ಕೊನೆಯ ತುದಿ ಹಾಗೂ ಅಂತಿಮ ವ್ಯಕ್ತಿಯನ್ನು ತಲುಪಲು ಸಾಧ್ಯವಾಗಿದೆ ಎಂದು, ಅಭಿಮಾನದಿಂದ ಸ್ಮರಿಸಿ, ಶ್ಲಾಘಿಸಿರುವುದು, ಆಕಾಶವಾಣಿಯ ಸರ್ವಶಕ್ತತೆ ಮತ್ತು ಸರ್ವವ್ಯಾಪಕತೆಯನ್ನು ಬಿಂಬಿಸುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಆಕಾಶವಾಣಿ ಧಾರವಾಡ ಕೇಂದ್ರದ ಅಮೃತ ಮಹೋತ್ಸವದ ಪ್ರಧಾನ

ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ, 'ಆಕಾಶವಾಣಿಯ ಅಮೃತ ಘಳಿಗೆ' ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಧ್ವನಿ: ಪ್ರಲ್ಹಾದ ಜೋಶಿ

ಆಕಾಶವಾಣಿ ಈ ಹಿಂದೆ ನಡೆಸುತ್ತಿದ್ದ ಸಂಗೀತ ಸಮ್ಮೇಳನಗಳನ್ನು ಪ್ರತಿ ವರ್ಷ ನಡೆಸಬೇಕು. ಅದಕ್ಕಾಗಿ 1 ಕೋಟಿ ರೂಪಾಯಿ ನೀಡುವುದಾಗಿ ಸಚಿವ ಪ್ರಲ್ಹಾದ ಜೋಶಿ ಭರವಸೆ ನೀಡಿದರು.

<><><>

ಅಥಿತಿಗಳಾಗಿ ಪಾಲ್ಗೊಂಡಿದ್ದ ಬೆಳಗಾವಿಯ ಕೆ.ಎಲ್.ಇ. ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಮಾತನಾಡಿ; ಗಡಿ ಜಿಲ್ಲೆ ಬೆಳಗಾವಿಯ ಚಿಕ್ಕೋಡಿ ತಾಲೂಕಿನ ಅಂಕಲಗಿಯಲ್ಲಿ ತಮಗೆ, ವಿಶ್ವಾಸಾರ್ಹ ಸುದ್ದಿ, ಮಾಹಿತಿ ಮತ್ತು ಮನೋರಂಜನೆಗೆ ಆಧಾರವಾಗಿದ್ದು, ಧಾರವಾಡ ಆಕಾಶವಾಣಿ ಕೇಂದ್ರ, ಇದರ ಪ್ರದೇಶ ಸಮಾಚಾರ ಈಗಲೂ ತಮಗೆ ಅಚ್ಚುಮೆಚ್ಚು ಎಂದರು. ಪಂ. ಭೀಮಸೇನ ಜೋಶಿ ಅವರು ತಮಗೆ ತಿಳಿಸಿದಂತೆ, ಮರಾಠಿ ನಾಟ್ಯ ಸಂಗೀತಕ್ಕೆ ಮೂಲ ಧಾರವಾಡದ ಜಾನಪದವಾಗಿದ್ದು, ಈ ಕಲೆ ಉಳಿದು, ಆ ಕಲಾವಿದರು ನಾಡನ್ನು ಬೆಳಗಲು ಸಾಧ್ಯವಾಗಿದ್ದು, ಧಾರವಾಡ ಆಕಾಶವಾಣಿಯಿಂದಾಗಿ ಎಂದು ನುಡಿದರು.

ಧ್ವನಿ: ಡಾ. ಪ್ರಭಾಕರ ಕೋರೆ

<><><>

ಇನ್ನೋರ್ವ ಅತಿಥಿ, ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್.ಪಾಟೀಲ ಮಾತನಾಡಿ, ಧಾರವಾಡ ಆಕಾಶವಾಣಿ ಮೂಲಕ, ರೈತರಿಗೆ ವೈಜ್ಞಾನಿಕ ಕೃಷಿಯ ಮಾಹಿತಿಯನ್ನು 'ಕೃಷಿ ಶೋಧನೆ-ಸಾಧನೆ' ಕಾರ್ಯಕ್ರಮದ ಮುಖಾಂತರ, ಹಂಗಾಮಿಗೆ ಅನುಗುಣವಾಗಿ ನೀಡಲು ಸಾಧ್ಯವಾಗಿದೆ. ಇಂಗ್ಲೀಷ್ ಬಲ್ಲ ತಜ್ಞರಿಗೆ, ವಿಜ್ಞಾನಿಗಳಿಗೆ, ಕೃಷಿ ಸಲಹೆಗಳು ಕನ್ನಡ ಕಲಿಸಿವೆ ಎಂದು, ಅಭಿಮಾನದಿಂದ ಹೇಳಿದರು.

<><><>

ಕಾರ್ಯಕ್ರಮ ಮುಖ್ಯಸ್ಥ ಶರಣಬಸವ ಚೋಳಿನ ಪ್ರಸ್ತಾವಿಕವಾಗಿ ಮಾತನಾಡಿದರು. ಆಕಾಶವಾಣಿ ಧಾರವಾಡ ಕೇಂದ್ರದ ಉಪ ಮಹಾನಿರ್ದೇಶಕ ಕೆ.ಅರುಣ್ ಪ್ರಭಾಕರ ಅಧ್ಯಕ್ಷತೆ ವಹಿಸಿದ್ದರು.

<><><>

ಕನ್ನಡ ಪುಸ್ತಕ ಪ್ರಾಧಿಕಾರದ 'ಮನೆಗೊಂದು ಗ್ರಂಥಾಲಯ' ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಗೃಹ ಕಚೇರಿ ಕೃಷ್ಣಾದಲ್ಲಿ ಉದ್ಘಾಟಿಸಿ ಇದೊಂದು ಮಹತ್ವಾಕಾಂಕ್ಷಿ ಯೋಜನೆ ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಾಧಿಕಾರ ಪ್ರಕಟಿಸಿರುವ ಕುಮಾರ ವ್ಯಾಸಭಾರತ ಸಂಪುಟಗಳನ್ನು ಅವರು ಲೋಕಾರ್ಪಣೆಗೊಳಿಸಿದರು. 'ಮನೆಗೊಂದು ಗ್ರಂಥಾಲಯ'ದ ಮೊದಲ ಗ್ರಂಥಾಲಯವನ್ನು ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿಯೇ ಸ್ಥಾಪಿಸುತ್ತಿದ್ದು, ಹಿರಿಯ ಸಾಹಿತಿ ನಾಡೋಜ ಡಾ. ಹಂಪ ನಾಗರಾಜಯ್ಯ ಇದಕ್ಕೆ ಚಾಲನೆ ನೀಡಿದರು.

<><><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಹೆಚ್ಚುವರಿ ಕಟ್ಟಡ ನಿರ್ಮಾಣ ಶಿಲಾನ್ಯಾಸ ಹಾಗೂ ಕೆಸೆಟ್–2024 ಪ್ರಮಾಣ ಪತ್ರ ವಿತರಣಾ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಕೆಸೆಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದವರಿಗೆ ಸಾಂಕೇತಿಕವಾಗಿ ಕೆಸೆಟ್ –2024ರ ಪ್ರಮಾಣಪತ್ರಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿತರಿಸಿದರು. ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರು ಮಾತನಾಡಿ; ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವುದು ಸೂಕ್ಷ್ಮ ವಿಚಾರ. ಈ ದಿಸೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪಾರದರ್ಶಕವಾಗಿ ಕೆಲಸ ನಿರ್ವಹಿಸಿದೆ. ಕಳೆದ ವರ್ಷ ಸುಮಾರು 17 ರಿಂದ 18 ಇಲಾಖೆಗಳ ನೇಮಕಾತಿ ಪರೀಕ್ಷೆಗಳನ್ನು  ಯಶಸ್ವಿಯಾಗಿ ನಿರ್ವಹಿಸಿ ಸುಮಾರು 6052 ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆಯನ್ನು ನಿರ್ವಹಿಸಿರುವ ಹೆಗ್ಗಳಿಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸಲ್ಲುತ್ತದೆ ಎಂದು ತಿಳಿಸಿದರು.

<><><>

ಇದೇ 21ರಂದು ಬೆಳಗಾವಿಯಲ್ಲಿ ಜೈ ಬಾಪು–ಜೈ ಭೀಮ್–ಜೈ ಸಂವಿಧಾನದ ಐತಿಹಾಸಿಕ ಅಭಿಯಾನ ನಡೆಯಲಿದ್ದು, ಯಶಸ್ವಿಗೊಳಿಸುವಂತೆ ಪಕ್ಷದ ಕಾರ್ಯಕರ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಹೋರಾಟ, ತ್ಯಾಗ, ಬಲಿದಾನಗಳಿಂದ ಕಟ್ಟಿದ ಪಕ್ಷವಾಗಿದೆ ಎಂದು ತಿಳಿಸಿದ್ದಾರೆ. ದೇಶದ ಸ್ವಾತಂತ್ರ್ಯ ಮತ್ತು ಸಂವಿಧಾನದ ಬಗ್ಗೆ ಗೌರವ ಇರುವ ಎಲ್ಲರನ್ನೂ ಅವರು ಸಮಾವೇಶಕ್ಕೆ ಸ್ವಾಗತಿಸಿದ್ದಾರೆ.

<><><>

ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಅವಧಿ ಮೀರಿ ಬಾಕಿ ಇರುವ ಎಲ್ಲಾ ಪ್ರಕರಣಗಳನ್ನೂ ಮುಂದಿನ ಆರು ತಿಂಗಳೊಳಗಾಗಿ ಇತ್ಯರ್ಥ ಪಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಗಡುವು ನೀಡಿದ್ದಾರೆ. ವಿಕಾಸಸೌಧದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳ ಜೊತೆಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, "ಎಸಿ ನ್ಯಾಯಾಲಯಗಳಲ್ಲಿ ಯಾವ ಪ್ರಕರಣಗಳನ್ನೂ ಆರು ತಿಂಗಳ ಅವಧಿಗಿಂತ ಹೆಚ್ಚಿನ ಕಾಲ ಇಟ್ಟುಕೊಳ್ಳುವಂತಿಲ್ಲ ಎಂಬ ಕಾನೂನಿದೆ. ಎಲ್ಲಾ ಪ್ರಕರಣಗಳನ್ನೂ ಮುಂದಿನ ಒಂದು ವರ್ಷದಲ್ಲಿ ಇತ್ಯರ್ಥಗೊಳಿಸುವಂತೆ ತಿಳಿಸಿದರು. ಎಸಿ ನ್ಯಾಯಾಲಯಗಳಲ್ಲಿ ಇನ್ನೂ 29 ಸಾವಿರಕ್ಕೂ ಅಧಿಕ ಪ್ರಕರಣಗಳು ಬಾಕಿ ಇದ್ದು, ಜನ ಸಾಮಾನ್ಯರು ಸಾಕಷ್ಟು ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಅಭಿಯಾನದ ಮಾದರಿಯಲ್ಲಿ ಕೆಲಸಕ್ಕೆ ಮುಂದಾಗಬೇಕು" ಎಂದು ಕರೆ ನೀಡಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಇಂದು ಮಕರ ಸಂಕ್ರಾಂತಿ ಹಬ್ಬ. ಸೂರ್ಯ ದಕ್ಷಿಣಾಯನದಿಂದ ಉತ್ತರಾಯಣಕ್ಕೆ ಪಥ ಬದಲಾಯಿಸುವ ಈ ಹಬ್ಬವನ್ನು ಸುಗ್ಗಿ ಹಬ್ಬ ಎಂದೂ ಕರೆಯಲಾಗುತ್ತದೆ. ಸಂಕ್ರಾಂತಿ ಆಚರಣೆಗೆ ಎಲ್ಲೆಡೆ ಭರದ ಸಿದ್ಧತೆಗಳನ್ನು

ಮಾಡಿಕೊಳ್ಳುತ್ತಿದ್ದು, ಕಬ್ಬು, ಕಡಲೇ ಕಾಯಿ, ಗೆಣಸು, ಎಳ್ಳು, ಬೆಲ್ಲ ಮೊದಲಾದ ಅಗತ್ಯ ಸಾಮಗ್ರಿಗಳ ಬೆಲೆ ಹೆಚ್ಚಳದ ನಡುವೆಯೂ ಮಾರುಕಟ್ಟೆಯಲ್ಲಿ ಜನತೆ ಹಬ್ಬಕ್ಕೆ ಸಾಮಗ್ರಿಗಳನ್ನು ಕೊಳ್ಳುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಗ್ರಾಮಾಂತರ ಪ್ರದೇಶಗಳಲ್ಲಿ ರೈತರು ರಾಸುಗಳನ್ನು ಅಲಂಕರಿಸಿ, ಕಿಚ್ಚು ಹಾಯಿಸುವುದು, ಕಾಟಿಮ ರಾಯನ ಪೂಜೆ ಕೈಗೊಳ್ಳುವ ಆಚರಣೆಗಳಿಗೆ ಸಿದ್ಧತೆಗಳನ್ನು ಕೈಗೊಳ್ಳುತ್ತಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ "ಸಂಕ್ರಾಂತಿ ಸಂಭ್ರಮ" ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಇಂದು ಮಧ್ಯಾಹ್ನ 2:30ಕ್ಕೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಜಿಲ್ಲಾಧಿಕಾರಿ ಡಾ. ಕುಮಾರ ನೇತೃತ್ವದಲ್ಲಿ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ದೊರೆಯಲಿದೆ.

<><><>

ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ರಾಜ್ಯದ ಜನತೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಶುಭಾಶಯ ಕೋರಿದ್ದಾರೆ. ರಾಜ್ಯಪಾಲರು ತಮ್ಮ ಸಂದೇಶದಲ್ಲಿ; "ಮಕರ ಸಂಕ್ರಾಂತಿ ಸುಗ್ಗಿಯ ಕಾಲವನ್ನು ಸೂಚಿಸುತ್ತದೆ ಮತ್ತು ಇದು ಕೃತಜ್ಞತೆ, ಸಮೃದ್ಧಿ ಮತ್ತು ಏಕತೆಯ ಆಚರಣೆಯಾಗಿದೆ. ಈ ಹಬ್ಬವು ಸಂಪ್ರದಾಯ, ಸಾಮರಸ್ಯ ಮತ್ತು ಪ್ರಕೃತಿಯ ಮೇಲಿನ ಗೌರವದ ಮಹತ್ವವನ್ನು ನಮಗೆ ನೆನಪಿಸುತ್ತದೆ" ಎಂದು ಹೇಳಿದ್ದಾರೆ.

<><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ವಿಶ್ವದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಮಹಾ ಕುಂಭಮೇಳಕ್ಕೆ ಅದ್ಧೂರಿಯ ಚಾಲನೆ ದೊರೆಯಿತು. ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಅಮೃತ ಸ್ನಾನದೊಂದಿಗೆ ಶತಮಾನದ ಮಹಾಕುಂಭ ಮೇಳ ಆರಂಭವಾಯಿತು. ದೇಶ–ವಿದೇಶಗಳ ಲಕ್ಷಾಂತರ ಭಕ್ತರು, ಪ್ರವಾಸಿಗರು ಈ ಭವ್ಯ ಕ್ಷಣಕ್ಕೆ ಸಾಕ್ಷಿಯಾದರು. ಪುಷ್ಯ ಹುಣ್ಣಿಮೆಯ ಮೊದಲ ಅಮೃತ ಸ್ನಾನದೊಂದಿಗೆ ಈ ಮಹಾ ಕುಂಭಮೇಳ ಆರಂಭವಾಗಿದ್ದು, ಈ ಪುಣ್ಯ ಕಾರ್ಯದಲ್ಲಿ ದೇಶ ಹಾಗೂ ವಿದೇಶಗಳಿಂದ ಆಗಮಿಸಿರುವ ಭಕ್ತ ಗಣ ಭಾಗಿಯಾಗಿದ್ದಾರೆ.

<><><>

ಯಾದಗಿರಿ ಜಿಲ್ಲಾ ಕೇಂದ್ರದಿಂದ ಸುಮಾರು 17 ಕಿಮೀ ದೂರದಲ್ಲಿರುವ ಸುಪ್ರಸಿದ್ಧ ಕ್ಷೇತ್ರವಾದ ಮೈಲಾಪುರದ ಮೈಲಾರಲಿಂಗೇಶ್ವರ ಜಾತ್ರೆ ಇಂದಿನಿಂದ ಆರಂಭವಾಗಲಿದೆ. ಬಂಡೆಗಲ್ಲುಗಳ ನಡುವಿನ ಸುಮಾರು 1,200 ವರ್ಷಗಳಷ್ಟು ಹಳೆಯದಾದ ಗುಹಾಂತರ ಮೈಲಾಪುರ ಮೈಲಾರಲಿಂಗೇಶ್ವರ ಜಾತ್ರೆ ಐದು ದಿನಗಳ ಕಾಲ ನಡೆಯಲಿದ್ದು, ಈ ಬಾರಿಯೂ ಸುಮಾರು 4–5 ಲಕ್ಷ ಜನ ಭಕ್ತರು ಸೇರುವ ನಿರೀಕ್ಷೆಯಿದೆ.

<><><>

ಧಾರವಾಡ ಜಿಲ್ಲೆಯ ನೂಲ್ವಿ–ಬೆಳಗಲಿ ಕ್ರಾಸ್ ಬಳಿಯಲ್ಲಿನ ಸಾವು– ನೋವು ತಪ್ಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ನೇತೃತ್ವದಲ್ಲಿ 12.5 ಕೋಟಿ ವೆಚ್ಚದಲ್ಲಿ ಅಂಡರ್ ಪಾಸ್ ನಿರ್ಮಾಣಕ್ಕೆ ಭೂಮಿ ಪೂಜೆ ನಡೆಸಲಾಗಿದೆ. ಜನರ ಸಮಸ್ಯೆ ಏನೇ ಇದ್ದರೂ ಪರಿಶೀಲನೆ ನಡೆಸಿ ಸ್ಪಂದಿಸುತ್ತೇವೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದ್ದಾರೆ. ಭೂಮಿ ಪೂಜೆ ನೆರವೇರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ನಿತಿನ್ ಗಡ್ಕರಿ ಅವರು ಜನರ ಅಗತ್ಯಕ್ಕೆ ಅನುಗುಣವಾಗಿ ರಸ್ತೆಗಳನ್ನು, ಬ್ರಿಡ್ಜ್ ಹಾಗೂ ಅಂಡರ್

ಪಾಸ್ ನಿರ್ಮಾಣ ಮಾಡುವ ಕಾರ್ಯವನ್ನು ಮಾಡಿದ್ದು, ಕುಂದಗೋಳ ಭಾಗದಲ್ಲಿಯೇ ಹೆಚ್ಚು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಮಾಡಿರುವುದು ವಿಶೇಷವಾಗಿದೆ ಎಂದರು.

<><><>

ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ಅಭಿವೃದ್ಧಿ ಕೆಲಸ–ಕಾರ್ಯಗಳನ್ನು ಹುಡುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದಿರುವ ಘಟನೆ ಅಮಾನವೀಯವಾದುದು. ಕೃತ್ಯದ ಹಿಂದಿರುವವರನ್ನು ಸರ್ಕಾರ ಪತ್ತೆ ಹಚ್ಚಿ ಬಂಧಿಸಬೇಕು. ಇಂತಹ ಘಟನೆಗಳು ಕಾನೂನು ಸುವ್ಯವಸ್ಥೆಯ ವೈಫಲ್ಯವನ್ನು ಪ್ರದರ್ಶಿಸಲಿವೆ ಎಂದು ಹೇಳಿದರು.

<><><><><><><><><>